ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ.**293**/2018

| | |
|---|---|
| ಸಿ.ಡಬ್ಲ್ಯೂ ಃ | 6 |
| ಪಿ.ಡಬ್ಲ್ಯೂ ಃ | 4 |

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಶ್ರೀಮತಿ ಬವಿತ ಎನ್.ಎಂ. |
| ತಂದೆ/ ಪತಿಯ ಹೆಸರು | ಃ | ಮಹೇಶ್ ಕುಮಾರ್ |
| ವಯಸ್ಸು | ಃ | 37 ವರ್ಷ |
| ವೃತ್ತಿ | ಃ | ಪಿ.ಎಸ್.ಐ , ಪಟ್ಟನಾಯಕನಹಳ್ಳಿ ಪೊಲೀಸ್ ಠಾಣೆ , ತುಮಕೂರು ಜಿಲ್ಲೆ |
| ವಾಸ | ಃ | ಪಟ್ಟನಾಯಕನಹಳ್ಳಿ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 30.05.2025**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ**

ನಾನು ಜೂನ್ 2017 ನೇ ಇಸವಿಯಿಂದ ಆಗಸ್ಟ 2018 ನೇ ಇಸವಿಯವರೆಗೆ ಅರಕೆರೆ ಪೊಲೀಸ್ ಠಾಣೆಯಲ್ಲಿ ಪಿ. ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ27.11.2017 ರಂದು ಈ ಪ್ರಕರಣದ ಕಡತನವನ್ನು ಚಾಸಾ.5 ರವರಿಂದ ಪಡೆದುಕೊಂಡು ಪರಿಶೀಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ.

ನಂತರ ಅದೇ ದಿನ ಆರೋಪಿಯು ಸ್ವತಃ ಠಾಣೆಗೆ ಹಾಜರಾದ ಮೇರೆಗೆ ಆತನಿಗೆ ಅಪರಾಧ ಪ್ರಕ್ರಿಯೆ ಸಂಹಿತೆ ಕಲಂ 40 ರ ಅಡಿಯಲ್ಲಿ ನೋಟೀಸನ್ನು ಜಾರಿ ಮಾಡಿರುತ್ತೇನೆ. ಸಾಕ್ಷಿಗೆ ಈಗ ಸದರಿ ನೋಟಿಸನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-4 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ನಂತರ ಅದೇ ದಿನ ಮಂಡ್ಯದ ಜಿಲ್ಲಾ ಆಸ್ಪತ್ರೆಯಿಂದ ಚಾಸಾ.1 ರವರ ಗಾಯದ ಪ್ರಮಾಣ ಪತ್ರ ಬಂದಿದ್ದು ಅದನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಗೆ ಈಗ ಸದರಿ ಗಾಯದ ಪ್ರಮಾಣ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು,

ಅದನ್ನು ಈಗಾಗಲೇ ನಿಪಿ-2 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ತನಿಖೆ ಪೂರ್ಣಗೊಂಡಿದ್ದು ಆರೋಪಿತನ ವಿರುದ್ದ ಆರೋಪ ಸಾಬೀತಾದ ಕಾರಣ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರವನ್ನು ಸಲ್ಲಿಸಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ</u>

ಆರೋಪಿ ಪೊಲೀಸ್ ಠಾಣೆಗೆ ಸ್ವತಃ ಹಾಜರಾಗುವ ಮೊದಲು ನಾನು ನೋಟೀಸನ್ನು ನೀಡಿರುವುದಿಲ್ಲ. ಗಾಯದ ಪ್ರಮಾಣ ಪತ್ರವನ್ನು ಪಡೆಯಲು ಆಸ್ಪತ್ರೆಗೆ ನಿವೇದನಾ ಪತ್ರವನ್ನು ನೀಡಿರುತ್ತೇವೆ. ಈ ಪ್ರಕರಣಕ್ಕೆ ಅನುಕೂಲವಾಗಲಿ ಎಂದು ನಾನು ವೈದ್ಯರ ಜೊತೆ ಶರೀಕಾಗಿ ಗಾಯದ ಪ್ರಮಾಣ ಪತ್ರವನ್ನು ಸೃಷ್ಟಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಕಡತವನ್ನು ಪಡೆದುಕೊಂಡ ನಂತರ ಚಾಸಾ.1 ರಿಂದ 4 ರವರುಗಳನ್ನು ಕರೆಯಿಸಿ ವಿಚಾರಣೆ ಮಾಡಿರುವುದಿಲ್ಲ. ಆರೋಪಿ ವಿರುದ್ದ ಯಾವುದೇ ಆರೋಪ ಸಾಬೀತಾಗದೆ ಇದ್ದರೂ ಸಹಾ ನಾನು ಆತನ ವಿರುದ್ದ ಸುಳ್ಳು ದೋಷಾರೋಪಣ ಪತ್ರವನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.